# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ–1208/2018/ಡಿ.ಆರ್.ಇ–2

ಬಹುಮಹಡಿಗಳ ಕಟ್ಟಡ,
ಡಾ: ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು.
ದಿನಾಂಕ : 13/10/2019

## ಕರ್ನಾಟಕ ಲೋಕಾಯುಕ್ತ ಕಾಯ್ದೆ 1984 ರ ಕಲಂ 12(1) ರನ್ವಯ ವರದಿ

ವಿಷಯ: ದೂರುದಾರರು ಸಲ್ಲಿಸಿರುವ ಅರ್ಜಿ ಹಾಗೂ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು 2019–20ನೇ ಸಾಲಿನಲ್ಲಿ ದೂರುದಾರರಿಗೆ ಯಂತ್ರಚಾಲಿತ ವಾಹನವನ್ನು ಒದಗಿಸಲು ಸೂಕ್ತ ಕ್ರಮ ಜರುಗಿಸುವುದರ ನಡವಳಿಕೆ ಕುರಿತು ವರದಿ.

*****

ಶ್ರೀ ಮುದ್ದಪ್ಪ ಬಿನ್ ಲೇಟ್ ತಿಮ್ಮಣ್ಣ, ಬೆಳ್ಳದಮಡಗು ಗ್ರಾಮ, ದೊಡ್ಡೇರಿ ಹೋಬಳಿ, ಮಧುಗಿರಿ ತಾಲ್ಲೂಕು, ತುಮಕೂರು ಜಿಲ್ಲೆ (ಇನ್ನು ಮುಂದೆ 'ದೂರುದಾರರು' ಎಂದು ಕರೆಯಲ್ಪಡುತ್ತಾರೆ) ರವರು ಈ ದೂರನ್ನು, ಜಿಲ್ಲಾ ಅಂಗವಿಕಲ ಕಲ್ಯಾಣ ಅಧಿಕಾರಿಗಳು, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ತುಮಕೂರು (ಇನ್ನು ಮುಂದೆ 'ಎದುರುದಾರರು' ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ತನಿಖೆ ನಡೆಸಿ ಸೂಕ್ತ ಕ್ರಮ ಜರುಗಿಸಬೇಕೆಂದು ಕೋರಿರುತ್ತಾರೆ. ಸದರಿ ದೂರಿನ ಆಧಾರದ ಮೇಲೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 9 ರಡಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ತನಿಖೆಗೆ ಆದೇಶಿಸಲಾಗಿರುತ್ತದೆ.

2. ದೂರಿನ ಸಂಕ್ಷಿಪ್ತ ವಿವರ: ದೂರುದಾರರು ತಾನು ವಿಕಲಚೇತನನಾಗಿದ್ದು ಮತ್ತು ವಾಹನ ಚಾಲನ ಪರವಾನಗಿ ಪತ್ರವನ್ನು ಹೊಂದಿರುತ್ತಾರೆಂದು ತಿಳಿಸಿರುತ್ತಾರೆ. ಎದುರುದಾರರ ಕಛೇರಿಯಲ್ಲಿ ನಿಗಧಿತ ನಮೂನೆಯಲ್ಲಿ ಆನ್‌ಲೈನ್‌ನಲ್ಲಿ ಸ್ವಯಂಚಾಲಿತ ತ್ರಿಚಕ್ರ ವಾಹನ ಬೇಕೆಂದು ಅರ್ಜಿ ಸಲ್ಲಿಸಿದ್ದರು. ಆದರೆ ಈವರೆಗೂ ದೂರುದಾರರಿಗೆ ತ್ರಿಚಕ್ರ ವಾಹನವನ್ನು ನೀಡಿರುವುದಿಲ್ಲ. ಎದುರುದಾರರನ್ನು ವಿಚಾರಿಸಿದಾಗ ಕಛೇರಿಯಲ್ಲಿ ನೀರು ನುಗ್ಗಿ ಕಡತಗಳು ನೀರಿನಲ್ಲಿ ನೆನದು ಹೋಗಿವೆ ಎಂದು ಹಾರಿಕೆ ಉತ್ತರ ನೀಡಿ ದೂರುದಾರರ ಅರ್ಜಿಯ ಬಗ್ಗೆ ನಿರ್ಲಕ್ಷ್ಯ ಮತ್ತು ವಿಳಂಬ ಮಾಡುತ್ತಿದ್ದಾರೆ ಎಂದು ತಿಳಿಸಿರುತ್ತಾರೆ.

ದೂರುದಾರರ ಜೊತೆಗೆ ಅರ್ಜಿ ಸಲ್ಲಿಸಿದ ಇತರ ಫಲಾನುಭವಿಗಳಿಗೆ ಎದುರುದಾರರು ದ್ವಿಚಕ್ರ ವಾಹನ ನೀಡಿರುತ್ತಾರೆ. ಆದರೆ ದೂರುದಾರರಿಗೆ ಮಾತ್ರ ನೀಡುತ್ತಿಲ್ಲ ಎಂದು ಆಪಾದಿಸಿರುತ್ತಾರೆ.

3. ದೂರಿನ ಜೊತೆಗೆ ದೂರುದಾರರ ವಿಕಲಚೇತನ ಪ್ರಮಾಣಪತ್ರ, ಆದಾಯ ಮತ್ತು ಜಾತಿ ಪ್ರಮಾಣಪತ್ರ, ವಾಸಸ್ಥಳದ ದೃಢೀಕರಣ ಪತ್ರ, ಆಧಾರ್ ಕಾರ್ಡಿನ ಚುನಾವಣೆ ಗುರುತಿನ ಚೀಟಿ, ವಾಹನ ಚಾಲನಾ ಪತ್ರದ ಹಾಗೂ ಆತನ ಜಮೀನಿನ ಜೆರಾಕ್ಸ್ ಪ್ರತಿಗಳನ್ನು ಹಾಜರುಪಡಿಸಿರುತ್ತಾರೆ.

4. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ದೂರುದಾರರು ಆನ್‌ಲೈನ್ ಮೂಲಕವಾಗಲೀ ಮೂಲ ಅರ್ಜಿಯಾಗಲೀ ತಮ್ಮ ಇಲಾಖೆಗೆ ಅರ್ಜಿ ಸಲ್ಲಿಸಿರುವ ಬಗ್ಗೆ ಸ್ವೀಕೃತಿ ಲಭ್ಯವಿರುವುದಿಲ್ಲ, ಇಲಾಖಾ ಯೋಜನೆಯಡಿ 2017–18ನೇ ಸಾಲಿನಲ್ಲಿ ವಿಕಲಚೇತನರಿಗೆ ದ್ವಿ–ಚಕ್ರ ವಾಹನ ನೀಡುವ ಸಂಬಂಧ ಆಯ್ಕೆ ಪ್ರಕ್ರಿಯೆಯ ಕಾರ್ಯ ಮುಗಿದಿರುವುದರಿಂದ 2018–19ನೇ ಸಾಲಿನ ಮುಂದಿನ ದಿನಗಳಲ್ಲಿ ಅರ್ಜಿ ಆಹ್ವಾನಿಸುವ ವೇಳೆಯಲ್ಲಿ ಅಗತ್ಯ ದಾಖಲೆಗಳೊಂದಿಗೆ ಅರ್ಜಿ ಸಲ್ಲಿಸಿದ್ದಲ್ಲಿ, ನಿಯಮಾನುಸಾರ ಆಧ್ಯತೆಯ ಮೇರೆಗೆ ಆಯ್ಕೆ ಮಾಡಲು ಪರಿಗಣಿಸಲಾಗುವುದು ಎಂದು ಉಲ್ಲೇಖಿಸಿ ದಿನಾಂಕ: 12/06/2017 ರಂದು ದೂರುದಾರರಿಗೆ ನೀವು ಕೇಳಿರುವ 2016–17ನೇ ಸಾಲಿಗ ಫಲಾನುಭವಿಗಳ ಆಯ್ಕೆಯಾಗಿರುವ ಕಾರಣ, ನೀವು 2017–18ನೇ ಸಾಲಿಗೆ ಅರ್ಜಿ ಸಲ್ಲಿಸಬೇಕಾಗಿ ಹಿಂಬರಹ ನೀಡಿದ್ದಾರೆ, ಅದರ ಜೊತೆಗೆ ಮುಖ್ಯ ಮಂತ್ರಿಯವರ ಉಪ ಕಾರ್ಯದರ್ಶಿ ರವರ ಪತ್ರ ಹಾಗೂ ದೂರುದಾರರು ನಿರ್ದೇಶಕರು, ಅಂಗವಿಕಲರ ಹಾಗೂ ಹಿರಿಯ ನಾಗರೀಕರ ಕಲ್ಯಾಣ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು ಇವರಿಗೆ ದಿನಾಂಕ: 07/11/2017 ರಂದು ಸಲ್ಲಿಸಿದ ಅರ್ಜಿಯ ಪ್ರತಿಯನ್ನು ಸಲ್ಲಿಸಿದ್ದಾರೆ.

5. ದೂರುದಾರರು ಆನ್‌ಲೈನ್ ಮೂಲಕ ಎದುರುದಾರರಿಗೆ ಅರ್ಜಿ ಸಲ್ಲಿಸಿದ್ದಾಗಿ ಹೇಳಿದ್ದರೂ ಸಹಿತ, ಅದಕ್ಕೆ ಪೂರಕವಾಗುವ ಯಾವುದೇ ದಾಖಲಾತಿಗಳನ್ನು ಅಥವಾ ವಿವರಗಳನ್ನು ಒದಗಿಸಿಲ್ಲ, ಅಂದರೆ ನಿರ್ದಿಷ್ಟವಾಗಿ ಯಾವ ದಿನಾಂಕದಂದು ಎದುರುದಾರರ ಕಛೇರಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲಾಗಿತ್ತು ಎನ್ನುವ ಬಗ್ಗೆ ವಿವರ ಒದಗಿಸಿಲ್ಲ ಮತ್ತು ನೇರವಾಗಿ ಎದುರುದಾರರ ಕಛೇರಿಗೆ ದೂರುದಾರರು ಯಂತ್ರಚಾಲಿತ ವಾಹನ ಕೋರಿ ಸಲ್ಲಿಸಿದ ಅರ್ಜಿಯ ಸ್ವೀಕೃತಿ ಪ್ರತಿಯನ್ನು ಅಥವಾ ಅಂಚೆ ರಶೀದಿಯನ್ನು ಹಾಜರುಪಡಿಸಿಲ್ಲ. ಇದರಿಂದ ದೂರುದಾರರು ಹೇಳಿದಂತೆ ಆನ್‌ಲೈನ್ ಮೂಲಕವಾಗಲೀ ಮೂಲ ಅರ್ಜಿಯಾಗಲೀ ತಮ್ಮ ಇಲಾಖೆಗೆ ಸಲ್ಲಿಸಿಲ್ಲ ಎಂಬುದು ಮೇಲ್ನೋಟಕ್ಕೆ ನಿಜ ಎನ್ನಿಸುತ್ತದೆ.

6. ಮುಖ್ಯ ಮಂತ್ರಿಗಳ ಉಪ ಕಾರ್ಯದರ್ಶಿ ರವರಿಗೆ ದೂರುದಾರರು ಸಲ್ಲಿಸಿದ ಅರ್ಜಿಯ ಪ್ರತಿ ಎದುರುದಾರರಿಗೆ ತಲುಪಿದ ನಂತರ, ಎದುರುದಾರರು ದೂರುದಾರರಿಗೆ 2016–17ನೇ ಸಾಲಿನಲ್ಲಿ ಈಗಾಗಲೇ ಫಲಾನುಭವಿಗಳ ಆಯ್ಕೆಯಾಗಿದ್ದು, 2017–18ನೇ ಸಾಲಿನಲ್ಲಿ ಅರ್ಜಿ ಸಲ್ಲಿಸಲು ತಿಳಿಸಿ ಹಿಂಬರಹ ನೀಡಿದ್ದಾರೆ. ಇದಾದನಂತರ ಅಂದರೆ 2017–18ನೇ ಸಾಲಿನಲ್ಲಿ ದೂರುದಾರರು ಎದುರುದಾರರಿಗೆ ಯಂತ್ರಚಾಲಿತ ವಾಹನ ಕೋರಿ ಅರ್ಜಿ ಸಲ್ಲಿಸಿದ ಬಗ್ಗೆ ಯಾವುದೇ ವಿವರ ಲಭ್ಯವಿರುವುದಿಲ್ಲ. ಆದ್ದರಿಂದ, ಈಗ ಸಲ್ಲಿಸಿರುವ ದಿನಾಂಕ: 07/01/2017 ರಂದು ನಿರ್ದೇಶಕರು, ಅಂಗವಿಕಲರ ಮತ್ತು ಹಿರಿಯ ನಾಗರೀಕರ ಕಲ್ಯಾಣ ಇಲಾಖೆ, ಪೋಡಿಯಂ ಬ್ಲಾಕ್, ಬೆಂಗಳೂರು ಇವರಿಗೆ ದೂರುದಾರರು ಸಲ್ಲಿಸಿರುವ ಅರ್ಜಿಯನ್ನು ಆಧಾರವಾಗಿ ಇಟ್ಟುಕೊಂಡು 2019–20ನೇ ಸಾಲಿನಲ್ಲಿ ದೂರುದಾರರಿಗೆ ಯಂತ್ರಚಾಲಿತ ವಾಹನವನ್ನು ಒದಗಿಸಲು ಸೂಕ್ತ ಕ್ರಮ ಕೈಗೊಳ್ಳಲು ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಿದೆ.

7. ಆದ್ದುದರಿಂದ, ಮೇಲಿನ ಕಾರಣ ಹಾಗೂ ಕಡತದಲ್ಲಿನ ಆಧಾರಗಳಿಂದ, ದೂರುದಾರರು ಸಲ್ಲಿಸಿರುವ ಅರ್ಜಿ ಹಾಗೂ ದಾಖಲೆಗಳನ್ನು ಆಧಾರವಾಗಿ ಇಟ್ಟುಕೊಂಡು 2019–20ನೇ ಸಾಲಿನಲ್ಲಿ ದೂರುದಾರರಿಗೆ ಯಂತ್ರಚಾಲಿತ ವಾಹನವನ್ನು ಒದಗಿಸಲು ಸೂಕ್ತ ಕ್ರಮ ಜರುಗಿಸಬೇಕಾಗಿ ನಿರ್ದೇಶಿಸಿ ಶಿಸ್ತು ಪ್ರಾಧಿಕಾರಕ್ಕೆ ಕರ್ನಾಟಕ ಲೋಕಾಯುಕ್ತ ಕಾಯ್ದೆ 1984ರ ಕಲಂ 12(1) ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ ಶಿಫಾರಸ್ಸು ಮಾಡಿದೆ.

8. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(2)ರ ಪ್ರಕಾರ, ಶಿಸ್ತು ಪ್ರಾಧಿಕಾರವು ವರದಿಯನುಸಾರ ಕೈಗೊಂಡ ಕ್ರಮದ ಬಗ್ಗೆ ಅಥವಾ ಕೈಗೊಳ್ಳಬಹುದಾದ ಕ್ರಮದ ಬಗ್ಗೆ, ಈ ವರದಿ ತಲುಪಿದ ದಿನಾಂಕದಿಂದ **ಒಂದು ತಿಂಗಳೊಳಗಾಗಿ** ಈ ಪ್ರಾಧಿಕಾರಕ್ಕೆ ವರದಿ ಮಾಡಲು ಸೂಚಿಸಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

N. Anand 18/11

**[ನ್ಯಾಯಮೂರ್ತಿ ಎನ್. ಆನಂದ]**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ, ಬೆಂಗಳೂರು.**